ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಮಾದಕ ದ್ರವ್ಯಗಳ ಜಾಲ ಭೇದಿಸುವಲ್ಲಿ ಪೊಲೀಸ್ ಇಲಾಖೆ ನಿರ್ಲಕ್ಷತನದ ಬಗ್ಗೆ

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

726 (659) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲೆಯಲ್ಲಿ ವ್ಯಾಪಕವಾಗಿ ಮಾದಕ ದ್ರವ್ಯಗಳ ಜಾಲ ಕಾರ್ಯ ನಿರ್ವಹಿಸುತ್ತಿದ್ದು 2016-2017 ರಲ್ಲಿ ಮತ್ತು 2019-20ರಲ್ಲಿ ದಾಖಲಾದ ಪ್ರಕರಣಗಳೆಷ್ಟು ; ಎಷ್ಟು ಪ್ರಕರಣಗಳು ನ್ಯಾಯಾಲಯದ ಶಿಕ್ಷೆಗೊಳಪಟ್ಟಿದೆ ;

(ಆ) ಮಾದಕ ದ್ರವ್ಯ ಪ್ರಕರಣಗಳ ವಿಚಾರಣೆಗೆ ಪ್ರತ್ಯೇಕ ನ್ಯಾಯಾಲಯ ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಇ) ಕಾರವಾರ ಜಿಲ್ಲೆಯ ಶಿರಸಿ ಹಾಗೂ ಹಳಿಯಾಳ ಮತ್ತು ದಾಂಡೇಲಿಯಲ್ಲಿ ಮಾದಕ ದ್ರವ್ಯಗಳ ಸೇವನೆಯು ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಆಗುತ್ತಿದ್ದು, ಈ ಬಗ್ಗೆ ಸಂಬಂಧಿಸಿದ ಪೊಲೀಸ್ ಅಧಿಕಾರಿಯು ನಿರ್ಲಕ್ಷ್ಯತನದಿಂದ ಶಾಲಾ ಕಾಲೇಜುಗಳಲ್ಲಿ ಬಹಿರಂಗವಾಗಿಯೇ ಮಾದಕ ದ್ರವ್ಯ ಸರಬರಾಜು ಆಗುತ್ತಿದ್ದರೂ ಸಹ ಯಾವುದೇ ಕ್ರಮಕೈಗೊಳ್ಳದಿರಲು ಕಾರಣವೇನು; ಈ ಬಗ್ಗೆ ಸವಿಸ್ತಾರ ವರದಿ ನೀಡುವುದು ; ಇದರಿಂದಾಗಿ ಮೃತಪಟ್ಟವರ ಸಂಖ್ಯೆ ಎಷ್ಟು ;

(ಈ) ಮಾದಕ ದ್ರವ್ಯಗಳ ಸರಬರಾಜು ಮಾಡುತ್ತಿರುವ ಕೆಲವೊಂದು ಅಂಗಡಿಗಳ ಮೇಲೆ ಇಲ್ಲಿಯವರೆಗೆ ದಾಂಡೇಲಿ/ಹಳಿಯಾಳ ತಾಲ್ಲೂಕಿನ ಪೊಲೀಸ್ ಅಧಿಕಾರಿಗಳು ದಾಳಿ ಮಾಡಿರುವ ವಿವರ ಹಾಗೂ ಎಷ್ಟು ಮಂದಿ ಮೇಲೆ ಕಾನೂನಿನ ಕ್ರಮಕೈಗೊಳ್ಳಲಾಗಿದೆ ; ಇದರಲ್ಲಿ ಪೊಲೀಸ್ ಅಧಿಕಾರಿಗಳು ಶಾಮಿಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಪೊಲೀಸ್ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಜರುಗಿಸಲಾಗುವುದೇ ? (ವಿವರ ನೀಡುವುದು)